ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ. ಹೌದು. ಆಯಾ ಜಿಲ್ಲಾ ಉಪ ನಿರ್ದೇಶಕರುಗಳಿಂದ ಹಾಗೂ ಇಲಾಖಾ ಅಧಿಕಾರಿಗಳನ್ನು ಕಳುಹಿಸಿ ವರದಿ ತರಿಸಿಕೊಂಡು ಅದರ ಆಧಾರದ ಮೇಲೆ ಹೆಚ್ಚುವರಿ ಉಪನ್ಯಾಸಕರನ್ನು ಗುರುತಿಸಿ ಸ್ಥಳಾಂತರಿಸಲಾಗುತ್ತಿದೆ.

ಆ. ಉಪನ್ಯಾಸಕರ ಅಂಗವಿಕಲತೆಯ ಬಗ್ಗೆ ಗಮನಕ್ಕೆ ಬಂದಿರುವುದಿಲ್ಲ. ಕನ್ನಡ ಬೋಧಿಸುವ ಉಪನ್ಯಾಸಕರು ಒಬ್ಬರೆ ಇರುವುದರಿಂದ ಜೇಷ್ಠತೆಯ ಪ್ರಶ್ನೆ ಉದ್ಭವಿಸುವುದಿಲ್ಲ.

ಇ. ಅಂಗವಿಕಲತೆ ಇರುವುದು ಪ್ರಾಚಾರ್ಯರಿಗೆ. ಉಪನ್ಯಾಸಕರಿಗಲ್ಲ. ಆದ್ದರಿಂದ ವಿದ್ಯಾರ್ಥಿಗಳ ಬೋಧನೆಗೆ ತೊಂದರೆಯಾಗಿರುವುದಿಲ್ಲ.

ಹೊಸ ಪ್ರೌಢಶಾಲೆ ಮತ್ತು ಕಿರಿಯ ಕಾಲೇಜು ಪ್ರಾರಂಭಿಸುವುದು.

೧೪೨೧(೧೬೯೪)

ಶ್ರೀ ಕೆ.ಬಿ.ಮಲ್ಲಿಕಾರ್ಜುನ (ಬೀರೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

೧) ೨೦೦೧-೦೨ನೇ ಸಾಲಿನಲ್ಲಿ ಹೊಸ ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

೨) ೨೦೦೧-೦೨ನೇ ಸಾಲಿನಲ್ಲಿ ಹೊಸ ಕಿರಿಯ ಕಾಲೇಜುಗಳನ್ನು ಪ್ರಾರಂಭಿಸುವ ಯೋಜನೆ ಸರ್ಕಾರಕ್ಕೆ ಇದೆಯೇ?

೩) ಹಾಗಿದ್ದಲ್ಲಿ ಚಿಕ್ಕಮಗಳೂರು ಜಿಲ್ಲೆ ಬೀರೂರು ಕ್ಷೇತ್ರದ ಕಳಸಾಪುರ ಮತ್ತು ಜೋಡಿಹೋಚಿಹಳ್ಳಿಯಲ್ಲಿ ಕಾಲೇಜು ಪ್ರಾರಂಭಿಸುವ ಉದ್ದೇಶ ಸರ್ಕಾರದ ಯೋಜನೆಯಲ್ಲಿದೆಯೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

೧) ಈ ವಿಷಯವು ಪರಿಶೀಲನೆಯಲ್ಲಿದೆ.

೨) ಇಲ್ಲ

೩) ಪ್ರಶ್ನೆ (೨)ಕ್ಕೆ ನೀಡಿರುವ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೀರೂರು ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಮಾಹಿತಿ.

೧೪೨೨(೧೬೯೫)

ಶ್ರೀ ಮಲ್ಲಿಕಾರ್ಜುನ ಕೆ.ಬಿ.(ಬೀರೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಚಿಕ್ಕಮಗಳೂರು ಜಿಲ್ಲೆ ಬೀರೂರು ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಕೆರೆಗಳು ಯಾವುವು?

ಆ. ಸದರಿ ಕೆಲಸಗಳ ಅಚ್ಚುಕಟ್ಟು ಪ್ರದೇಶಗಳೆಷ್ಟು ಈ ಅಚ್ಚುಕಟ್ಟು ಪ್ರದೇಶಗಳಲ್ಲಿ ಒತ್ತುವರಿ ಆಗಿದೆಯೆ; ಒತ್ತುವರಿಯಾಗಿರುವ ಭೂಮಿ ವಿಸ್ತೀರ್ಣವೆಷ್ಟು;

ಇ. ಹಾಗಿದ್ದಲ್ಲಿ ಈ ಒತ್ತುವರಿ ಪ್ರದೇಶವನ್ನು ಖಿಲ್ಲಾ ಮಾಡಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೆ:

ಈ. ಸದರಿ ಕೆರೆಗಳ ಅಭಿವೃದ್ಧಿಯ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳುವುದೆ?

ಶ್ರೀ ಎಂ.ವೈ.ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರು):

ಅ. ಚಿಕ್ಕಮಗಳೂರು ಜಿಲ್ಲೆ ಬೀರೂರು ಕ್ಷೇತ್ರದಲ್ಲಿ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೆರೆಗಳ ಪಟ್ಟಿಯನ್ನು ಅನುಬಂಧ-೧ರಲ್ಲಿ ಲಗತ್ತಿಸಿದೆ.

ಆ. ಅನುಬಂಧ-೧ ಕೆರೆಗಳ ಅಚ್ಚುಕಟ್ಟು ಪ್ರದೇಶದ ವಿವರಗಳನ್ನು ನೀಡಿದೆ. ಚಿಕ್ಕಮಗಳೂರು ಜಿಲ್ಲೆ ಸಿಂದಿಗೆರೆ ಹಳ್ಳಿಯ ಹೊಸಕೆರೆಯ ಅಚ್ಚುಕಟ್ಟು ಪ್ರದೇಶದಲ್ಲಿ ಒತ್ತುವರಿಯಾದ ಬಗ್ಗೆ ವರದಿಯಾಗಿದೆ. ಈ ಬಗ್ಗೆ ಸಮೀಕ್ಷೆ ನಡೆಯುತ್ತಿದ್ದು ಸಮೀಕ್ಷಾ ವರದಿಯನ್ನು ನಿರೀಕ್ಷಿಸಲಾಗಿದೆ.

ಇ. ಸಮೀಕ್ಷೆ(ಸರ್ವೆ) ಕಾರ್ಯ ಮುಗಿದ ಕೂಡಲೇ ಒತ್ತುವರಿ ಪ್ರದೇಶವನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಈ. ಸದ್ಯಕ್ಕೆ ೨೦೦೦-೦೧ನೇ ಸಾಲಿನಲ್ಲಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ಚಿಕ್ಕಮಗಳೂರು ತಾಲ್ಲೂಕು ಹಳೇ ಲಕ್ಯ ಮಾದರಸನಕೆರೆಯನ್ನು ಅಭಿವೃದ್ಧಿಗೊಳಿಸಲಾಗಿದೆ. ರೂ.೫೦೦೦೦ ಕೆರೆಗಳ ಜೀರ್ಣೋದ್ಧಾರ ನಿಧಿಯಿಂದ